ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,
ಬಿ.ಟಿ.ಎಂ.ಲೇಔಟ್ ಉಪ ವಿಭಾಗ,
16ನೇ ಮುಖ್ಯರಸ್ತೆ, ಬಿ.ಟಿ.ಎಂ.1ನೇ ಹಂತ,
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
ಬೆಂಗಳೂರು-29, ದಿನಾಂಕ : 20-01-2021

## ವಾರ್ಡ್ ಸಮಿತಿ ಸಭೆಯ ಸೂಚನಾ ಪತ್ರ

ವಿಷಯ:- ವಾರ್ಡ್ ಸಮಿತಿ ಸಭೆಯನ್ನು ನಡೆಸುವ ಬಗ್ಗೆ
ಉಲ್ಲೇಖ:1) ಘನ ಉಚ್ಚ ನ್ಯಾಯಾಲಯದ ಆದೇಶ ಸಂಖ್ಯೆ: ಡಬ್ಲ್ಯೂಪಿ 24739/2012,
ದಿನಾಂಕ: 10.11.2017
2) ಕೇಂದ್ರ ಕಛೇರಿ ಆದೇಶ ಸಂಖ್ಯೆ: ಬಿ12(5)/ಪಿಆರ್/35/2020-21,
ದಿನಾಂಕ: 02.11.2020

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಆದೇಶಗಳಂತೆ ಪ್ರತಿ ಮಾಹೆಯ 1ನೇ ಮತ್ತು 3ನೇ ಶನಿವಾರ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಬೇಕಾಗಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ದಕ್ಷಿಣವಲಯದ ವಾರ್ಡ್ ಸಂಖ್ಯೆ:146 ಲಕ್ಕಸಂದ್ರ 16ನೇ ಅಡ್ಡರಸ್ತೆ ಸಹಾಯಕ ಅಭಿಯಂತರರ ರವರ ಕಛೇರಿ ಬೆಂಗಳೂರು – 560030 ಇಲ್ಲಿ ಸಭೆಯನ್ನು ದಿನಾಂಕ: 22.01.2021 ರ ಬೆಳಿಗ್ಗೆ 10:300 ಗಂಟೆಗೆ ನಿಗಧಿಪಡಿಸಲಾಗಿದ್ದು, ವಾರ್ಡ್ ಸಮಿತಿ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾಡ್ ಸಂಖ್ಯೆ 146 ಲಕ್ಕಸಂದ್ರಕ್ಕೆ ಸಂಬಂಧಿಸಿದ ಅಧಿಕಾರಿಗಳು ಸಭೆಗೆ ತಪ್ಪದೇ ಹಾಜರಾಗಲು ಈ ಮೂಲಕ ಕೋರುತ್ತೇನೆ.

:ಸಭಾ ಅಜೆಂಡಾ:

| | |
|---|---|
| 1) | ಹಿಂದಿನ ಸಭೆಯ ನಡುವಳಿಗಳನ್ನು ಓದಿ ರೆಕಾರ್ಡ್ ಮಾಡುವುದು |
| 2) | ವಾರ್ಡ್ ಸಮಿತಿಯನ್ನು ರಚಿಸುವ ಬಗ್ಗೆ |
| 3) | ವಾರ್ಡ್ ವ್ಯಾಪ್ತಿಯಲ್ಲಿನ ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವ ವಿಚಾರ |
| 4) | ವಾರ್ಡ್ ವ್ಯಾಪ್ತಿಯಲ್ಲಿನ ಕಾಮಗಾರಿಗಳು ಮತ್ತು ರಸ್ತೆ ಗುಂಡಿಗಳ ದುರಸ್ಥಿಪಡಿಸುವ ಬಗ್ಗೆ |
| 5) | ಮಾನ್ಯ ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸಬಹುದಾದ ಇತರೆ ವಿಷಯಗಳ ಬಗ್ಗೆ ಚರ್ಚೆ |

20/01/2021
ಕಾರ್ಯದರ್ಶಿಗಳು,
ವಾರ್ಡ್ ಸಂಖ್ಯೆ:146, [redacted]
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ರವರಿಗೆ :-

1) ಸಹಾಯಕ ಕಾರ್ಯಪಾಲಕ ಅಭಿಯಂತರರು(ಬಿಟಿಎಂ)ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
2) ಸಹಾಯಕ ಕಾರ್ಯಪಾಲಕ ಅಭಿಯಂತರರು(ಘ.ತ್ಯಾನಿ.ಅ.ಬಿಟಿಎಂ)ವಿಭಾಗ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
3) ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಉಪ ವಿಭಾಗ ಎಸ್-14 ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು ಉಪ ವಿಭಾಗ ಬೆಂಗಳೂರು ನೀರುಸರಬರಾಜು ಮಂಡಳಿ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
5) ತೋಟಗಾರಿಕೆ ಅಧೀಕ್ಷಕರು (ದಕ್ಷಿಣ) ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
6) ಆರೋಗ್ಯ ವೈದ್ಯಾಧಿಕಾರಿಗಳು ಬಿ.ಟಿ.ಎಂ ಲೇಔಟ್ ವಿಭಾಗದವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
7) ಸಹಾಯಕ ಕಂದಾಯ ಅಧಿಕಾರಿಗಳು ಬಿ.ಟಿ.ಎಂ ಉಪ ವಿಭಾಗ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು ವಿದ್ಯುತ್ ಉಪವಿಭಾಗ ದಕ್ಷಿಣ ವಲಯ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.

Scanned with CamScanner

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಬಿ.ಟಿ.ಎಂ ಲೇಔಟ್ ಉಪ-ವಿಭಾಗದ ವಾರ್ಡ್ ಸಂಖ್ಯೆ-146 ಲಕ್ಕಸಂದ್ರ**

**ಕಛೇರಿಯಲ್ಲಿ ದಿನಾಂಕ: 22.01.2021 ರಂದು ನಡೆದ ವಾರ್ಡ್ ಸಮಿತಿ ಸಭೆಯ**

**ನಡವಳಿಗಳು.**

ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿಗಳನ್ನು ರಚಿಸುವ ಸಲುವಾಗಿ ಮಾನ್ಯ ಆಯುಕ್ತರು, ಬಿ.ಬಿ.ಬಿ.ಎಂ.,ರವರ ಕಛೇರಿ ಆದೇಶದ ಸಂಖ್ಯೆ:ಬಿ12(5)/ಪಿಆರ್/35/2020-21/02-11-2020ರ ಆದೇಶದಂತೆ ನೋಡೆಲ್ ಅಧಿಕಾರಿಯನ್ನಾಗಿ ಶ್ರೀ.ಡಾ॥ ಲಕ್ಷ್ಮಿನಾರಾಯಣ ಸ್ವಾಮಿ ಸಹಾಯಕ ನಿರ್ದೇಶಕರು, (ಪಶುಪಾಲನೆ ಫ್ರೇಜರ್‌ಟೌನ್ ಕಸಾಯಿಖಾನೆ ಬಿ.ಬಿ.ಎಂ.ಪಿ.)ರವರನ್ನು ನೇಮಿಸಲಾಗಿದ್ದು, ಸದರಿ ಆದೇಶದಂತೆ ವಾರ್ಡ್ ಮಟ್ಟದಲ್ಲಿ ಸಾರ್ವಜನಿಕರಿಗೆ ಪ್ರಮುಖವಾದ ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ವಸ್ತುಗಳ ನಿರ್ವಹಣೆ, ಸಾರ್ವಜನಿಕ ಆರೋಗ್ಯ, ಶಿಕ್ಷಣ, ನಗರದ ಸ್ವಚ್ಛತೆ, ರಸ್ತೆ ನಿರ್ವಹಣೆ/ನಿರ್ಮಾಣ, ಬೀದಿ ದೀಪಗಳ ನಿರ್ವಹಣೆ, ನೀರು ಸರಬರಾಜು ಮತ್ತು ಒಳಚರಂಡಿ ಮತ್ತು ಇನ್ನಿತರ ಕಲ್ಯಾಣ ಕಾರ್ಯಕ್ರಮಗಳಂತಹ ಹಲವಾರು ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ಒದಗಿಸುವ ನಿಟ್ಟಿನಲ್ಲಿ ಮತ್ತು ಪಾಲಿಕೆಯ ಹಾಗೂ ಸಾರ್ವಜನಿಕರ ನಡುವೆ ಸಮನ್ವಯ ಸಾಧಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿ ಸಭೆಗೆ ಈ ಕೆಳಕಂಡ ಅಧಿಕಾರಿ ವರ್ಗ/ ಸದಸ್ಯರು ಮತ್ತು ಸ್ಥಳೀಯ ನಾಗರೀಕರು ಹಾಜರಾಗಿದ್ದರು.

**ಸಭೆಗೆ ಹಾಜರಿದ್ದ ಅಧಿಕಾರಿ/ಸದಸ್ಯರುಗಳ ವಿವರ**

| ಕ್ರ.ಸಂ. | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ಶ್ರೀ.ಡಾ॥ ಲಕ್ಷ್ಮಿನಾರಾಯಣ ಸ್ವಾಮಿ ಸಹಾಯಕ ನಿರ್ದೇಶಕರು, (ಪಶುಪಾಲನೆ ಫ್ರೇಜರ್‌ಟೌನ್ ಕಸಾಯಿಖಾನೆ) ಬಿ.ಬಿ.ಎಂ.ಪಿ. | 9480685653 |
| 2 | ಶ್ರೀ.ನರೇಶ್‌ಕುಮಾರ್.ಕೆ ಸ.ಇಂ- ವಾರ್ಡ್ 146(ಪ್ರಭಾರ) | 9844407499 |
| 3 | ಶ್ರೀ.ಸಂದೀಪ್ ಕೆಲಸ ಪರಿವೀಕ್ಷಕರು ಬಿ.ಬಿ.ಎಂ.ಪಿ | 9513342625 |
| 4 | ಮುಹಿಬುಲ್ಲಾ ಹೆ.ಚ್.ಎಂ ಮೌಲ್ಯಮಾಪಕರು | 9886306562 |
| 5 | ಶ್ರೀ. ವಿಜಯ್ ಕಿರಿಯ ಆರೋಗ್ಯ ಪರಿವೀಕ್ಷಕರು | 9738721476 |
| 6 | ಶ್ರೀ.ನಜರುಲ್ಲಾ ಗ್ಯಾಂಗ್‌ಮೆನ್ | 8867594491 |
| 7 | ಶ್ರೀ. ಜಾದವ್ ಪ್ರಕಾಶ್ ಸ.ಅ | 7498626883 |
| 8 | ಶ್ರೀ. ಪರಶುರಾಮ ಕೆ TI BBMP | 9916666134 |
| 9 | ಶ್ರೀ.ಹೇಮಂತ್ ಕುಮಾರ್ ಮಾರ್ಷಲ್ | 9900845779 |
| 10 | ಶ್ರೀ. ಚಂದ್ರಶೇಖರ್ DWCC | 9535484078 |
| 11 | ಶ್ರೀ. ಇರ್ಷಾದ್ ಖಾನ್ ಕಂದಾಯ ಇಲಾಖೆ | 9206118409 |
| 12 | ಶ್ರೀ ಸುನೀಲ್ ಕುಮಾರ್ ಸ.ಅ BWSSB | 7619626888 |
| 13 | ಶ್ರೀಮತಿ. ರೂಪ ಹಿರಿಯ ಆರೋಗ್ಯ ಪರಿವೀಕ್ಷಕರು | 9900858279 |

* * * * * *

ದಿನಾಂಕ-22-01-2021 ರಂದು ಬೆಳಿಗ್ಗೆ 10.30 ಗಂಟೆಗೆ ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅದ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರಿಕರಿಗೆ ಸ್ವಾಗತವನ್ನು ಕೋರಿ ಹೊಸ ವರ್ಷದ ಶುಭಾಶಯಗಳನ್ನು ಹೇಳಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಯನ್ನು ನೀಡಿರುತ್ತಾರೆ. ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.

1. **ಘನತ್ಯಾಜ್ಯ ನಿರ್ವಹಣೆ ಬಗ್ಗೆ.**

ಸಭೆಗೆ ಹಾಜರಿದ್ದ ಶ್ರೀ ವಿಜಯ್ ಕಿರಿಯ ಆರೋಗ್ಯ ಪರಿವೀಕ್ಷರು ರವರು ಮಾತನಾಡಿ ಸಮರ್ಪಕವಾಗಿ ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯವನ್ನು ವಿಲೇವಾರಿ ಮಾಡುತ್ತಿದ್ದು, ಇತ್ತಿಚೆಗೆ ಬ್ಲಾಕ್ ಸ್ಪಾಟ್‌ಗಳಲ್ಲಿ ಬ್ಯಾನರ್‌ಗಳನ್ನು ಅಳವಡಿಸಿ ಸಾರ್ವಜನಿಕರು ಕಸ ಹಾಕದಂತೆ ಜಾಗೃತಿ ಮೂಡಿಸಲಾಗಿದೆ, ಹಾಗೂ ಪ್ರತಿನಿತ್ಯ ಕನಿಷ್ಠ 4ಟನ್ ಹಸಿ ತ್ಯಾಜ್ಯವನ್ನು ಹೊರಸಾಗಿಸಲು ಮಾನ್ಯ ಆಯುಕ್ತರು ಆದೇಶಿಸಿದ್ದು ಅದರಂತೆ ಕ್ರಮವಹಿಸಲಾಗಿರುತ್ತದೆ ಮತ್ತು ಎಲ್ಲಾ 15 ಆಟೋ ಟಿಪ್ಪರ್‌ಗಳಿಗೆ ಜಿ.ಪಿ.ಎಸ್



Scanned with CamScanner

ಅಳವಡಿಸಲಾಗಿದ್ದು ಸದರಿ ಆಟೋಗಳ ಚಲನವಲನಗಳನ್ನು ಸೂಕ್ಷ್ಮವಾಗಿ ಕೇಂದ್ರ ಕಛೇರಿಯಿಂದ ಗಮನಿಸಲಾಗುತ್ತಿರುತ್ತೆಂದು ಸಭೆಗೆ ತಿಳಿಸಿದರು.

**ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 146** ರವರು ಮಾತನಾಡಿ ಸಮರ್ಪಕವಾಗಿ ಮುಖ್ಯರಸ್ತೆಗಳಲ್ಲಿ ಸರಿಯಾಗಿ ಕಸ ಗುಡಿಸುತ್ತಿರುವುದಿಲ್ಲ ಹಾಗೂ ಕರ್ಬ್ ಪಕ್ಕದಲ್ಲಿ ಬಿದ್ದಿರುವ ಮಣ್ಣನ್ನು ಸಹ ತೆರವುಗೊಳಿಸಿರುವುದಿಲ್ಲವೆಂದು ತಿಳಿಸಿದಿರು ಹಾಗೂ ಸದರಿ ಮಣ್ಣನ್ನು ತಾವೆ ತೆರವುಗೊಳಿಸುವುದು ತಮ್ಮ ಕರ್ತವ್ಯವಾಗಿರುತ್ತದೆಂದು ತಿಳಿಸಿದರು, ಈ ಬಗ್ಗೆ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಸದರಿ ದೂರಿನ ಬಗ್ಗೆ ಕೂಡಲೇ ಕ್ರಮವಹಿಸುವುದಾಗಿ ಸಭೆಗೆ ತಿಳಿಸಿದರು

ಮುಂದಿನ ಸಭೆಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಘ.ತ್ಯಾ.ನಿ ರವರು ಕಡ್ಡಾಯವಾಗಿ ಹಾಜರಾಗಲು ಮಾನ್ಯ ಅಧ್ಯಕ್ಷರು ಸೂಚಿಸಿದರು.

2. **ಬೀದಿ ದೀಪಗಳ ನಿರ್ವಹಣೆ ಬಗ್ಗೆ.**

ಸಭೆಗೆ ಹಾಜರಿದ್ದ ಶ್ರೀ. ಇರ್ಷಾದ್ ಖಾನ್ ಕಂದಾಯ ಇಲಾಖೆ ರವರು ಮಾತನಾಡಿ, ಸದರಿಯವರು ವಾರ್ಡ್ 146ರ ಎಸ್.ಆರ್‌ನಗರದ ನಿವಾಸಿಯಾಗಿದ್ದು ಬನ್ನೇರುಘಟ್ಟ ಮುಖ್ಯರಸ್ತೆಯ ಚಂದ್ರಪ್ಪ ಬಡಾವಣೆಯ ಮುಂಭಾಗದಲ್ಲಿ ಯಾವುದೇ ಬೀದಿ ದೀಪಗಳು ಕಾರ್ಯನಿರ್ವಹಿಸುತ್ತಿಲ್ಲವೆಂದು ಹಿಂದಿನ ಸಭೆಯಲ್ಲಿ ತಿಳಿಸಿದ್ದು ಈ ತಹಲ್‌ವರೆಗೂ ಸಹ ಕ್ರಮವಹಿಸಿರುವುದಿಲ್ಲ ಎಂದು ಸಭೆಗೆ ತಿಳಿಸಿದರು.

**ಮಾನ್ಯ ಅಧ್ಯಕ್ಷರು** ರವರು ಮಾತನಾಡಿ ಮುಂದಿನ ಸಭೆಯಲ್ಲಿ ಕಡ್ಡಾಯವಾಗಿ ಸಂಬಂಧಿಸಿದ ದೂರನ್ನು ಪರಿಹರಿಸುವಂತೆ ಸಂಭಂದಿಸಿದ ಅಭಿಯಂತರರಿಗೆ ತಿಳಿಸಲು ಸೂಚಿಸಿದರು.

3. **ಕಂದಾಯ ಇಲಾಖೆ ಬಗ್ಗೆ.**

ಸಭೆಗೆ ಹಾಜರಿದ್ದ ಶ್ರೀ. ಪರಶುರಾಮ ಕೆ TI BBMP ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು 17.36 ಕೋಟಿಗಳ ಆಸ್ತಿ ತೆರಿಗೆ ವಸೂಲಿಮಾಡಬೇಕಾಗಿದ್ದು, ಸುಮಾರು ಶೇ 61% ರಷ್ಟು ಪಾವತಿಯಾಗಿರುತ್ತದೆ ಎಂದು ಸಭೆಗೆ ತಿಳಿಸದರು. **ಈ ಬಗ್ಗೆ ಮಾನ್ಯ ಅಧ್ಯಕ್ಷರು** ರವರು ಮಾತನಾಡಿ ಪಾವತಿ ಮಾಡಿಲ್ಲದಿರುವಂತಹ ಮಾಲೀಕರಿಗೆ ನೋಟಿಸ್ ಜಾರಿಮಾಡಿ ಕ್ರಮವಹಿಸುವಂತೆ ಸೂಚಿಸಿದರು.

4. **ಕಾಮಗಾರಿ ಇಲಾಖೆ ಬಗ್ಗೆ.**

ಸಭೆಗೆ ಹಾಜರಿದ್ದ ಶ್ರೀ.ನರೇಶ್‌ಕುಮಾರ್.ಕೆ ಸ.ಇಂ– ವಾರ್ಡ್ 146(ಪ್ರಭಾರ) ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಈಗಾಗಲೇ ಎಲ್ಲಾ ರಸ್ತೆಗುಂಡಿಗಳನ್ನು ಮುಚ್ಚಿ ಕ್ರಮವಹಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

**ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.**

22/01/2024

ಕಾರ್ಯದರ್ಶಿಗಳು,
ವಾರ್ಡ್ ಸಂಖ್ಯೆ:146, ಲಕ್ಕಸಂದ್ರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

**<u>ಪ್ರತಿಯನ್ನು:</u>**

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
6. ಅಧೀಕ್ಷಕ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ.ಲೇಔಟ್ ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕೆ
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲಮಂಡಳಿ, ಬಿ.ಟಿ.ಎಂ ರವರಿಗೆ ಮುಂದಿನ ಕ್ರಮಕ್ಕಾಗಿ



Scanned with CamScanner